ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ
C/o, ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ
E-mail ID: icps.kar@gmail.com Ph.No.080-22879381/82

ಸಂ:ಕರಾಸಮರಸೊ/ಐಇಸಿ/ಮಹ/ಸಾಕಇಪ/30/2018-19 ದಿನಾಂಕ:07.11.2018

ಗೆ,
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೇ,

ವಿಷಯ: ದಿನಾಂಕ: 10-11-2018ರಿಂದ 11-11-2018ರ ವರೆಗೆ ಮಕ್ಕಳ ದಿನಾಚರಣೆ ಅಂಗವಾಗಿ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಮಾಹಿತಿ ಮಳಿಗೆ ನಿರ್ಮಿಸುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸದಂತೆ 2018ನೇ ಸಾಲಿನಲ್ಲಿ "ಮಕ್ಕಳ ದಿನಾಚರಣೆ" ಅಂಗವಾಗಿ "ಮಕ್ಕಳ ಹಬ್ಬ" ಕಾರ್ಯಕ್ರಮವನ್ನು ಕಬ್ಬನ್ ಉದ್ಯಾನವನದಲ್ಲಿ ದಿನಾಂಕ:10.11.2018 ಮತ್ತು 11.11.2018 ರಂದು ಆಚರಿಸಲಾಗುತ್ತಿದೆ. ಕರ್ನಾಟಕ ಸರ್ಕಾರದ ಸನ್ಮಾನ್ಯ ಮುಖ್ಯ ಮಂತ್ರಿಗಳು ಉದ್ಘಾಟಿಸಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿಜೇತ ಮಕ್ಕಳು, ಶಾಲಾ ಮಕ್ಕಳು, ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಸಂಸ್ಥೆಗಳ ಮಕ್ಕಳು ಭಾಗವಹಿಸಲಿದ್ದಾರೆ. ಲಕ್ಷಾಂತರ ಮಕ್ಕಳು ಹಾಗೂ ಸಾರ್ವಜನಿಕರು ಕಬ್ಬನ್ ಉದ್ಯಾನವನಕ್ಕೆ ಆಗಮಿಸಿ ಕಾರ್ಯಕ್ರಮವನ್ನು ವೀಕ್ಷಿಸಲಿದ್ದಾರೆ. ಈಗಾಗಲೇ ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆ / ಪೂರ್ವಭಾವಿ ಸಭೆಗಳಲ್ಲಿ ಚರ್ಚಿಸಿ ನಿರ್ದೇಶಿಸಿದಂತೆ ತಮ್ಮ ಇಲಾಖೆಯಿಂದ ಈ ಕೆಳಕಂಡಂತೆ ಕ್ರಮವಹಿಸಲು ಕೋರಿದೆ.

- ಸರ್ಕಾರಿ ಮತ್ತು ಸರ್ಕಾರೇತರ ಶಾಲಾ ಮಕ್ಕಳು ಮಕ್ಕಳ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತು ಕ್ರಮವಹಿಸುವುದು.
- ತಮ್ಮ ಇಲಾಖೆ ವತಿಯಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಊಟೋಪಚಾರ ಹಾಗೂ ಸ್ಥಳದ ವ್ಯವಸ್ಥೆಯನ್ನು ನೋಡಿಕೊಳ್ಳುವುದು.
- ಶಿಕ್ಷಣ ಇಲಾಖೆಯಲ್ಲಿ ಲಭ್ಯವಿರುವ ವಿವಿಧ ಸೌಲಭ್ಯಗಳ ಬಗ್ಗೆ ಹಾಗೂ ಆರ್‌ಟಿಇ ಬಗ್ಗೆ ಮಾಹಿತಿ ಕೇಂದ್ರ ತೆರೆಯುವುದು, ಮಳಿಗೆ ಸಂಬಂಧಿತ ವಿಷಯಗಳ ಕುರಿತು ಯೋಜನಾ ನಿರ್ದೇಶಕರು, ಸ್ತ್ರೀ ಶಕ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದೂರವಾಣಿ ಸಂಖ್ಯೆ: 9448377223 ಇವರನ್ನು ಸಂಪರ್ಕಿಸುವುದು.
- ಪಠ್ಯ ಪುಸ್ತಕಗಳನ್ನೊಳಗೊಂಡಂತೆ ಮಕ್ಕಳಿಗೆ ಉಪಯುಕ್ತವಾದ ಪುಸ್ತಕಗಳು ಮತ್ತು ಮಕ್ಕಳ ಸ್ನೇಹಿ ಸ್ಲೋಗನ್‌ಗನ್ನೊಳಗೊಂಡಂತೆ ಪ್ರದರ್ಶನ ಏರ್ಪಡಿಸುವುದು.
- ಸರ್ಕಾರದಿಂದ ದೊರೆಯುವ ಸೌಲಭ್ಯಗಳ (ಸಮವಸ್ತ್ರ, ಶೂ-ಸಾಕ್ಸ್, ಬುಕ್ಸ್ ಮತ್ತು ಬೈಸಿಕಲ್) ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡುವುದು.

ತಮ್ಮ ವಿಶ್ವಾಸಿ,

Anseeth 7/11/18

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

Scanned by CamScanner

ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ
C/o, ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ
E-mail ID: icps.kar@gmail.com Ph.No.080-22879381/82

ಸಂ:ಕರಾಸಮರಸೊ/ಐಇಸಿ/ಮಹ/ಸಾಕಇಪ/30/2018-19 ದಿನಾಂಕ:07.11.2018

ಗೆ,
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೇ,

ವಿಷಯ: ದಿನಾಂಕ: 10-11-2018 ಮತ್ತು 11-11-2018ರವರೆಗೆ ಮಕ್ಕಳ ದಿನಾಚರಣೆ ಅಂಗವಾಗಿ **"ಮಕ್ಕಳ ಹಬ್ಬ"** ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಕಾರ್ಯಕ್ರಮದ ಚಟುವಟಿಕೆಗಳ ಪೋಸ್ಟರ್‌ನ್ನು ತಮ್ಮ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2018ನೇ ಸಾಲಿನಲ್ಲಿ ಮಕ್ಕಳ ಹಬ್ಬ ಮತ್ತು ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಕಬ್ಬನ್ ಉದ್ಯಾನವನದಲ್ಲಿ ದಿನಾಂಕ:10.11.2018 ಮತ್ತು 11.11.2018 ರವರೆಗೆ ಮಕ್ಕಳ ದಿನಾಚರಣೆಯ ಅಂಗವಾಗಿ **"ಮಕ್ಕಳ ಹಬ್ಬ"** ಕಾರ್ಯಕ್ರಮವನ್ನು ಆಚರಿಸಲಾಗುತ್ತಿದ್ದು, ಕರ್ನಾಟಕ ಸರ್ಕಾರದ ಸನ್ಮಾನ್ಯ ಮುಖ್ಯ ಮಂತ್ರಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿಜೇತ ಮಕ್ಕಳು, ಶಾಲಾ ಮಕ್ಕಳು, ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಸಂಸ್ಥೆಗಳ ಮಕ್ಕಳು ಭಾಗವಹಿಸಲಿದ್ದಾರೆ. ಇದಲ್ಲದೆ ಲಕ್ಷಾಂತರ ಮಕ್ಕಳು ಹಾಗೂ ಸಾರ್ವಜನಿಕರು ಆಗಮಿಸಿ ಕಾರ್ಯಕ್ರಮವನ್ನು ವೀಕ್ಷಿಸಲಿದ್ದಾರೆ.

ಸದರಿ ಕಾರ್ಯಕ್ರಮದಲ್ಲಿ ಮಕ್ಕಳಿಗಾಗಿ ಆಯೋಜಿಸಿರುವ ವೀಕ್ಷಿಸುವ ಚಟುವಟಿಕೆಗಳು, ಭಾಗವಹಿಸುವ ಚಟುವಟಿಕೆಗಳು ಹಾಗೂ ಸಾಹಸ ಕ್ರೀಡಾ ಚಟುವಟಿಕೆಗಳು, ಕಾರ್ಯಕ್ರಮದ ದಿನಾಂಕ, ಸ್ಥಳದ ಮಾಹಿತಿಯನ್ನು ಒಳಗೊಂಡ ಪೋಸ್ಟರ್‌ನ್ನು ವಿನ್ಯಾಸಗೊಳಿಸಲಾಗಿದೆ. ಸದರಿ ಪೋಸ್ಟರನ್ನು ತಮ್ಮ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಕಾರ್ಯಕ್ರಮದ ಬಗ್ಗೆ ಮಕ್ಕಳಿಗೆ ಮಾಹಿತಿ ನೀಡಬೇಕಾಗಿ ಈ ಮೂಲಕ ಕೋರಲಾಗಿದೆ.

ತಮ್ಮ ವಿಶ್ವಾಸಿ,
Anseller 7/11/18
ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

Scanned by CamScanner